ವಿಷಯ :– ಮಾಗಡಿ ಪಟ್ಟಣದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯಕ್ಕೆ ಕಟ್ಟಡ ಕಟ್ಟಿಸುವ ಬಗ್ಗೆ.

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 611 (1109)

ಶ್ರೀ ಹೆಚ್. ಎಂ. ರೇವಣ್ಣ (ಮಾಗಡಿ) :– ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಮಾಗಡಿ ಪಟ್ಟಣದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯಕ್ಕೆ ಕಟ್ಟಡ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರದವರು ಕೈಗೊಳ್ಳುವ ಕ್ರಮವೇನು ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು) :–

ಅ) ಹೌದು.

ಆ) ಕಾಲೇಜನ್ನು ಕಟ್ಟುವ ಸಲುವಾಗಿ ಜಮೀನನ್ನು ವಶಪಡಿಸಿಕೊಳ್ಳುವ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ವಿಷಯ :– ಬೆಳಗಾವಿಯಲ್ಲಿ ತಾಂತ್ರಿಕ ವಿಶ್ವವಿದ್ಯಾಲಯ ಪ್ರಾರಂಭಿಸುವುದು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ 612 (1284)

ಶ್ರೀ ಶಿವಾನಂದ ಎಸ್. ಕೌಜಲಗಿ (ಬೈಲಹೊಂಗಲ) :– ಮಾನ್ಯ ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯಪಾಲರ ಭಾಷಣದಲ್ಲಿ ಬೆಳಗಾವಿಯಲ್ಲಿ ತಾಂತ್ರಿಕ ವಿಶ್ವವಿದ್ಯಾಲಯ ಪ್ರಾರಂಭಿಸುವ ವಿಚಾರವನ್ನು ಪ್ರಸ್ತಾಪಿಸಿರುವ ಸಂಗತಿಯು ನಿಜವೆ ?

ಆ) ಹಾಗಿದ್ದಲ್ಲಿ ಸರ್ಕಾರದವರು ಬೆಳಗಾವಿಯಲ್ಲಿ ತಾಂತ್ರಿಕ ವಿಶ್ವವಿದ್ಯಾಲಯ ಪ್ರಾರಂಭಿಸಲು ಯಾವ ಕ್ರಮ ಕೈಗೊಂಡಿರುವರು ?

ಇ) ಅದು ಈಗ ಯಾವ ಹಂತದಲ್ಲಿದೆ ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು) :–

ಅ) ಹೌದು.

ಆ) ಸರ್ಕಾರವು ಸಧ್ಯದಲ್ಲಿ ತಾಂತ್ರಿಕ ವಿಶ್ವವಿದ್ಯಾಲಯವನ್ನು ಸ್ಥಾಪಿಸುವುದೆಂಬ ನಿರ್ಣಯವನ್ನು ತೆಗೆದುಕೊಂಡಿದೆ.

ಇ) ಉದ್ಭವಿಸುವುದಿಲ್ಲ.

ವಿಷಯ :– ರಾಜ್ಯದಲ್ಲಿ ಶಿಕ್ಷಕರ ಜಾಗಗಳು ಖಾಲಿ ಇರುವ ಬಗ್ಗೆ.

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ 613 (1285)

ಶ್ರೀ ಶಿವಾನಂದ ಹೆಚ್. ಕೌಜಲಗಿ (ಬೈಲಹೊಂಗಲ) :– ಮಾನ್ಯ ಶಿಕ್ಷಣ ಮತ್ತು ಸಂಸದೀಯ ವ್ಯವಹಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ರಾಜ್ಯದಲ್ಲಿ ಎಷ್ಟು ಶಿಕ್ಷಕರ ಜಾಗಗಳು ಖಾಲಿ ಇರುತ್ತವೆ ?

ಆ) ಪ್ರತಿಯೊಂದು ಜಿಲ್ಲೆಯಲ್ಲಿ ಎಷ್ಟೆಷ್ಟು ಖಾಲಿ ಇರುತ್ತವೆ ?

ಶ್ರೀ ಎಂ. ವೀರಪ್ಪ ಮೊಯಿಲಿ (ಶಿಕ್ಷಣ ಮಂತ್ರಿಗಳು) :–

ಅ) 8,991.

ಆ) ಅನುಬಂಧ 'ಎ' — ಪಟ್ಟಿ ಲಗತ್ತಿಸಿದೆ.